## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1240
ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 29.12.2022.
ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಯವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| (ಆ) | ಬಂದಿದ್ದಲ್ಲಿ, ಗ್ರಾಮ ಪಂಚಾಯತಿಗಳಿಗೆ ಸಿಬ್ಬಂದಿಗಳ ಕೊರತೆ ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 384 ಗ್ರಾಪಂಕಾ 2018 (ಭಾಗ-1), ದಿನಾಂಕ:23-11-2018 ರಲ್ಲಿ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ನಿವೃತ್ತಿ, ಅಮಾನತ್ತು, ಇನ್ನಿತರೆ ಕಾರಣಗಳಿಂದ ತೆರವಾದಲ್ಲಿ ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಪ್ರಭಾರದಲ್ಲಿರಿಸುವುದು. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸುವುದು. ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿ ಅಥವಾ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಿಗೆ ಪ್ರಭಾರ ವಹಿಸಬಾರದಾಗಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ವೃಂದಕ್ಕೆ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |

| | | |
|---|---|---|
| (ಇ) | ಯಾವ ಯಾವ ಸ್ತರದ ಸಿಬ್ಬಂದಿಗಳ ಕೊರತೆಯಿದೆ: (ವಿವರ ನೀಡುವುದು) | ಕಲಬುರಗಿ ಜಿಲ್ಲೆಯ 70 ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಲ್ಲಿ 24 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದಲ್ಲಿ 25 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಲ್ಲಿ 11 ಹುದ್ದೆಗಳು ಖಾಲಿ ಇರುತ್ತವೆ.<br><br>ಯಾದಗಿರಿ ಜಿಲ್ಲೆಯ ಜಿಲ್ಲೆಯ 20 ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದಲ್ಲಿ 05 ಹುದ್ದೆಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ವೃಂದದಲ್ಲಿ 14 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದಲ್ಲಿ 09 ಹುದ್ದೆಗಳು ಖಾಲಿ ಇರುತ್ತವೆ. |
| (ಈ) | ಪಿ.ಡಿ.ಓ. ಗಳು ಗ್ರಾಮ ಪಂಚಾಯತ್ ಸದಸ್ಯರನ್ನು ಅಗೌರವದಿಂದ ನಡೆಸಿಕೊಳ್ಳುತ್ತಿರುವ ವಿಚಾರದಲ್ಲಿ ಸರ್ಕಾರ ನಿಲುವೇನು? (ವಿವರ ನೀಡುವುದು) | ಇಂತಹ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. ಆದಾಗ್ಯೂ, ಗ್ರಾಮ ಪಂಚಾಯತಿ ಚುನಾಯಿತ ಪ್ರತಿನಿಧಿಗಳೊಂದಿಗೆ ಗೌರವದಿಂದ ನಡೆದುಕೊಳ್ಳುವಂತೆ ಜಿಲ್ಲಾ ಪಂಚಾಯತಿ ಮಟ್ಟದಲ್ಲಿ ಜರುಗಿದ ವಿವಿಧ ಸಭೆಗಳಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. |

ಸಂಖ್ಯೆ: ಗ್ರಾಅಪ 391 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ